**ಕರ್ನಾಟಕ ಸರ್ಕಾರ**

ಸಂಖ್ಯೆ: ಆಕುಕ 86 ಸಿಜಿಎಂ 2020

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ: 11.04.2020

## ಸುತ್ತೋಲೆ

ಈ ಮೂಲಕ ಎಲ್ಲಾ ಇಲಾಖೆಗಳ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ತಿಳಿಯ ಪಡಿಸುವುದೇನೆಂದರೆ, ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಮೂಲಕ ಬಿಡುಗಡೆ ಮಾಡಿರುವ ದೃಢೀಕೃತ ಕೊರೊನಾ ವೈರಸ್ ಪಾಸಿಟಿವ್ ಪ್ರಕರಣಗಳ ಮಾಹಿತಿ ಪಡೆಯಲು Arogya Setu COVID – 19 ಆ್ಯಪ್ ಕಾರ್ಯ ನಿರ್ವಹಿಸುತ್ತಿದೆ. ವೈರಸ್ ಸೋಂಕಿಗೆ ತುತ್ತಾಗಿರುವ ವ್ಯಕ್ತಿಯ ಮೇಲೆ ನಿಗಾ ಇರಿಸುವ ಮತ್ತು ವೈಯಕ್ತಿಕ ಅಲರ್ಟ್ ಸಂದೇಶದ ಮೂಲಕ ಎಚ್ಚರಿಕೆ ನೀಡುವ ವಿಶೇಷತೆಯುಳ್ಳ **ಆರೋಗ್ಯ ಸೇತು ಕೋವಿಡ್-19** ಟ್ರ್ಯಾಕರ್ ಮೊಬೈಲ್ ಆ್ಯಪ್ ಅಳವಡಿಸಿಕೊಂಡರೆ ನಿಮ್ಮ ಬಳಿಗೆ ಕೊರೊನಾ ಪಾಸಿಟಿವ್ ದೃಢಪಟ್ಟಿರುವ ವ್ಯಕ್ತಿ ಬಂದರೆ, ಅಥವಾ ನಿಮಗೆ ಸಮೀಪದಲ್ಲಿ ಇದ್ದರೆ, ಕೂಡಲೇ ಆ್ಯಪ್ ಅಲರ್ಟ್ ಮೂಲಕ ನಿಮ್ಮನ್ನು ಎಚ್ಚರಿಸುತ್ತದೆ. ಹೀಗಾಗಿ ಸಾಮಾಜಿಕ ಅಂತರ ಕಾಪಾಡಿಕೊಂಡು ನಿಮ್ಮನ್ನು ನೀವು ರಕ್ಷಿಸಿಕೊಳ್ಳಬಹುದು.

**ಬಳಕೆ ಹೇಗೆ?**

ಈ ಆ್ಯಪ್ ನ್ನು iOS ಮತ್ತು Android ಸ್ಮಾರ್ಟ್‌ಫೋನ್‌ನಲ್ಲಿ ಬಳಸಬಹುದಾಗಿದ್ದು, ಡೌನ್ ಲೋಡ್ ಮಾಡಿಕೊಂಡ ಬಳಿಕ ಬ್ಲೂಟೂತ್ ಮತ್ತು ಲೊಕೇಶನ್ ಆನ್ ಮಾಡಿರಬೇಕು. ಅದರಲ್ಲಿ ಸೆಟ್ ಲೊಕೇಶನ್ ಎಂದಿರುವುದನ್ನು ALWAYS ಎಂದು ಕೊಡಬೇಕು.

**Arogya Setu COVID – 19 ಆ್ಯಪ್ ನ್ನು ಸಾರ್ವಜನಿಕರು, ಸರ್ಕಾರಿ ನೌಕರರು, ಸ್ವಯಂ ಸೇವಕರು, ಎಲ್ಲರೂ ಕಡ್ಡಾಯವಾಗಿ ಡೌನ್ ಲೋಡ್ ಮಾಡಿಕೊಂಡು ಬಳಸಬೇಕೆಂದು ಪ್ರಚುರ ಪಡಿಸಲು ಸೂಚಿಸಿದೆ.**

**ತಮ್ಮ ವ್ಯಾಪ್ತಿಯಲ್ಲಿನ ಎಲ್ಲಾ ಇಲಾಖೆಗಳ ಅಧೀನ ಅಧಿಕಾರಿ/ಸಿಬ್ಬಂದಿಗಳೂ ಸಹ ಈ ಆಪ್‌ನ್ನು ಡೌನ್ ಲೋಡ್ ಮಾಡಕೊಂಡು ಬಳಸಿ ಇದರ ಪ್ರಯೋಜನ ಪಡೆಯಲು ನಿರ್ದೇಶನ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.**

(ಟಿ.ಎಂ. ವಿಜಯ ಭಾಸ್ಕರ್)
ಮುಖ್ಯ ಕಾರ್ಯದರ್ಶಿ

ಇವರಿಗೆ,

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು/ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಕ್ರಮಕ್ಕಾಗಿ.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು
3. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು/ಜಿಲ್ಲಾ ಶಸ್ತ್ರಚಿಕಿತ್ಸಕರು